# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **560 (728)**
ಸದಸ್ಯರ ಹೆಸರು : ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸುವ ದಿನಾಂಕ : 22.07.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ವಿವರ |
|---|---|---|
| ಅ) | 2024ರ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಅತಿ ಕಡಿಮೆ ಫಲಿತಾಂಶ ಬಂದಿರುವುದು ಸರ್ಕಾರದ ಗಮನಕ್ಕೆ ಇದೆಯೇ | ಇಲ್ಲ.<br>ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಎರಡು ಪರೀಕ್ಷೆಗಳನ್ನು ಮಾಡಿ ಫಲಿತಾಂಶ ಪ್ರಕಟಿಸಿದ್ದು, ಸದರಿ ಪರೀಕ್ಷೆಗಳಲ್ಲಿ ಕ್ರಮವಾಗಿ 73.4% ಮತ್ತು 31.02% ಫಲಿತಾಂಶ ಬಂದಿರುತ್ತದೆ. ಕ್ರೋಢೀಕರಿಸಿದಾಗ ಶೇ 81 ರಷ್ಟು ವಿದಾರ್ಥಿಗಳಿ ತೇರ್ಗಡೆಯಾಗಿರುತ್ತಾರೆ. ಪರೀಕ್ಷೆ-3 ನ್ನು ದಿನಾಂಕ:02.08.2024 ರಿಂದ 09.08.2024 ರವರೆಗೆ ನಡೆಸಲಾಗುತ್ತಿದ್ದು, ಸದರಿ ಪರೀಕ್ಷೆಯಲ್ಲೂ ಉತ್ತಮ ಫಲಿತಾಂಶ ಬರುವ ನಿರೀಕ್ಷೆ ಹೊಂದಲಾಗಿದೆ. ಇದು ಉತ್ತಮ ಫಲಿತಾಂಶವೇ ಆಗಿರುತ್ತದೆ. |
| ಆ) | ಹಾಗಿದ್ದಲ್ಲಿ, ಅತಿ ಕಡಿಮೆ ಫಲಿತಾಂಶ ಬರಲು ಕಾರಣವೇನು: (ವಿವರ ನೀಡುವುದು) | |
| ಇ) | ಈ ವರ್ಷ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿ ಕ್ಯಾಮೆರಾ ಅಳವಡಿಸಿ ಪರೀಕ್ಷೆ ನಡೆಸಿರುವುದು ವಿದ್ಯಾರ್ಥಿಗಳಿಗೆ ಮಾನಸಿಕ ಕುಂಠಿತ ಉಂಟಾಗಿ ಪರೀಕ್ಷೆಯಲ್ಲಿ ಕಡಿಮೆ ಅಂಕ ಪಡೆಯಲು ಕಾರಣವಾಯಿತೆ; | ಪರೀಕ್ಷೆಯನ್ನು ಪಾರದರ್ಶಕವಾಗಿ ನಡೆಸಲು ಪ್ರಪ್ರಥಮ ಬಾರಿಗೆ ಎಲ್ಲಾ ಪರೀಕ್ಷಾ ಕೇಂದ್ರಗಳಲ್ಲಿ ಸಿಸಿಟಿವಿಗಳ ಮೂಲಕ ವೆಬ್ ಕ್ಯಾಸ್ಟಿಂಗ್ ಮಾಡುವ ಹೊಸ ಪದ್ಧತಿಯನ್ನು ಪರಿಚಯಿಸಲಾಗಿದೆ. ಪರೀಕ್ಷಾ ಕೊಠಡಿಗಳ ದೃಶ್ಯಾವಳಿಗಳನ್ನು ಮೇಲ್ವಿಚಾರಣೆ ಮಾಡಲು ಎಲ್ಲಾ ಜಿಲ್ಲೆಗಳಲ್ಲಿ ನಿಯಂತ್ರಣಾ ಕೊಠಡಿಗಳನ್ನು ಸ್ಥಾಪಿಸಲಾಗಿತ್ತು. ಈ ನಾವೀನ್ಯ ಕ್ರಮವು ವಿನೂತನವಾಗಿದ್ದು ಪರೀಕ್ಷೆಯ ಸಮಗ್ರತೆಯನ್ನು ಪುನರ್ ಸ್ಥಾಪಿಸಲು ಸಹಾಯಕವಾಗಿದೆ. ಈ ಮೂಲಕ ಪರೀಕ್ಷಾ ಅಕ್ರಮಗಳನ್ನು ಆಶ್ರಯಿಸದೆ ಪರೀಕ್ಷೆಗಳನ್ನು ಬರೆಯುವ ಅಭ್ಯಾಸವನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವಲ್ಲಿ ಸಫಲವಾಗಿದ್ದು, ಈ ಕ್ರಮವನ್ನು ಶಿಕ್ಷಕರು, ವಿದ್ಯಾರ್ಥಿಗಳು ಹಾಗೂ ಪೋಷಕರನ್ನು ಒಳಗೊಂಡಂತೆ ಎಲ್ಲಾ ಭಾಗೀದಾರರು ಸ್ವಾಗತಿಸಿದ್ದಾರೆ. |
| ಈ) | ಫಲಿತಾಂಶವನ್ನು ಹೆಚ್ಚಿಸಲು ಗ್ರೇಸ್ ಮಾರ್ಕ್ಸ್ ನೀಡಿರುವುದಕ್ಕೆ ಕಾರಣಗಳೇನು ಯಾವ ಮಾನದಂಡಗ ಮೇಲೆ ಗ್ರೇಸ್ ಮಾರ್ಕ್ಸ್ ನೀಡಲಾಗಿದೆ? (ಸಂಪೂರ್ಣ ಮಾಹಿತಿ ಒದಗಿಸುವುದು) | ಗ್ರೇಸ್ ಮಾರ್ಕ್ಸ್ ನ್ನು ಎಲ್ಲರಿಗೂ ನೀಡಿರುವುದಿಲ್ಲ. ಉತ್ತೀರ್ಣತೆಗೆ ಹತ್ತಿರದ ಅಂಕಗಳನ್ನು ಗಳಿಸಿರುವ ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಶೇ.20 ರಷ್ಟು ಕೃಪಾಂಕವನ್ನು ನೀಡಲಾಗಿದೆ. |

**ಸಂಖ್ಯೆ: ಇಪಿ 193 ಎಸ್ಎಲ್‌ಬಿ 2024**

**(ಎಸ್. ಮಧು ಬಂಗಾರಪ್ಪ)**
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು